# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ : ಸ.ಅ/ವಾರ್ಡ್ ಸಮಿತಿ/ಸಭೆ- 8/2020-21 ದಿನಾಂಕ : 13-01-2021

## -: ಸಭಾ ಸೂಚನಾ ಪತ್ರ :-

ಉಲ್ಲೇಖ : 1) ಮಾನ್ಯ ಆಯುಕ್ತರ ಕಛೇರಿಯ ತಿದ್ದುಪಡಿ ಆದೇಶ ಸಂಖ್ಯೆ : ಬಿ12(5)ಪಿಆರ್/35/ 2020-21 ದಿನಾಂಕ : 02-10-2020.

-****-

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ, ಸರ್ವಜ್ಞನಗರ ವಿಭಾಗ, ಮಾರುತಿಸೇವಾನಗರ ಉಪವಿಭಾಗ ವ್ಯಾಪ್ತಿಗೆ ಒಳಪಡುವ ವಾರ್ಡ್ ಸಂಖ್ಯೆ-29 ಕಾಚರಕನಹಳ್ಳಿಯ ಕುವೆಂಪು ಪಾರ್ಕ್ ಪಕ್ಕದಲ್ಲಿರುವ ಪಾಲಿಕೆ ಕಟ್ಟಡದಲ್ಲಿ ದಿನಾಂಕ : 16-01-2021 ಶನಿವಾರ ರಂದು ಬೆಳಿಗ್ಗೆ 10-30 ಗಂಟೆಗೆ ಮಾನ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರು ನಿಯೋಜಿಸಿರುವ ವಾರ್ಡ್‌ನ ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ, ವಾರ್ಡ್ ಸಮಿತಿ ಸಭೆಯನ್ನು ಕರೆಯಲಾಗಿದ್ದು, ಸದರಿ ಸಭೆಗೆ ಎಲ್ಲಾ ಸದಸ್ಯರು ಸಕಾಲದಲ್ಲಿ ಆಗಮಿಸಿ ಸಭೆಯನ್ನು ಯಶಸ್ವಿಗೊಳಿಸಲು ಕೋರಿದೆ.

## -: ಸಭಾ ಅಜೆಂಡಾ :-

| | |
|---|---|
| 1 | ವಾರ್ಡಿನ ವಿವಿಧ ಬಡಾವಣೆಗಳ ಅಭಿವೃದ್ಧಿ ಕಾರ್ಯಗಳ ಬಗ್ಗೆ. |
| 2 | ವಾರ್ಡಿನ ಘನತ್ಯಾಜ್ಯ ನಿರ್ವಹಣೆಯ ಬಗ್ಗೆ. |
| 3 | ಕಂದಾಯ ಇಲಾಖೆಗೆ ಸಂಬಂಧಿಸಿದ ಬಗ್ಗೆ. |
| 4 | ನೀರು ಸರಬರಾಜು ಮತ್ತು ಒಳಚರಂಡಿಗೆ (BWSSB) ಸಂಬಂಧಿಸಿದ ವಿಷಯಗಳ ಬಗ್ಗೆ. |
| 5 | ವಿದ್ಯುತ್ ಸರಬರಾಜು (Bescom) ಸಂಬಂಧಿಸಿದ ವಿಷಯಗಳ ಬಗ್ಗೆ. |
| 6 | ಉದ್ಯಾನವನ ಮತ್ತು ಬೀದಿ ದೀಪ ನಿರ್ವಹಣೆಯ ಕುರಿತು |
| 7 | Traffic isues and Law and Order issues |
| 8 | ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್-19 ಬಗ್ಗೆ ಚರ್ಚಿಸುವ ಬಗ್ಗೆ. |
| 9 | ಮಾನ್ಯ ನೋಡಲ್ ಅಧಿಕಾರಿಯವರ ಅಪ್ಪಣೆ ಮೇರೆಗೆ ಚರ್ಚಿಸಬಹುದಾದ ಇತರೆ ವಿಷಯಗಳು. |

(ನೋಡಲ್ ಅಧಿಕಾರಿ ರವರ ಆದೇಶದ ಮೇರೆಗೆ)

[Stamp: Banasawadi Police Station, Bangalore-560 084; signed 14-01-21]

[Stamp: Banasawadi Traffic Police Station, Bangalore; No. ...; Date 14/01/2021]

[Stamp: ಎಚ್.ಬಿ.ಆರ್ ಉಪವಿಭಾಗ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ; 15/1/2021]

ಸಹಿ/-
ಕಾರ್ಯದರ್ಶಿ ವಾರ್ಡ್ ಸಮಿತಿ-29
ಹಾಗೂ ಸಹಾಯಕ ಅಭಿಯಂತರರು,
ವಾರ್ಡ್-29

ಪ್ರತಿಯನ್ನು:-

1. ಶ್ರೀಮತಿ ಸರಸ್ವತಿ, ಸದಸ್ಯರು, ಜೆಲ್ವಾಯು ವಿಹಾರ ಅಪಾರ್ಟ್‌ಮೆಂಟ್ ಓನರ್ಸ್ ಅಸೋಸಿಯೇಷನ್ ರವರು ಸಭೆಯಲ್ಲಿ ಭಾಗವಹಿಸಲು ಕೋರಿದೆ.

[Stamp: Assistant Executive Engineer, B.W.S.S.B, East..., H.R.B.R Layout, Bangalore; Date 15-1-2021]

[Stamp: Junior Engineer (Ele), R.S.PALYA O&M UNIT, BESCOM, E-8, SUB-DIVISION, BANASWADI, BANGALORE-43; 15/1/2021]

Received on 15/01/21 AEE BESCOM.

2. ಶ್ರೀ ಉತ್ತಪ್ಪ, ಸದಸ್ಯರು (ಅಧ್ಯಕ್ಷರು, ಹೆಚ್.ಆರ್.ಬಿ.ಆರ್ 3ನೇ ಬ್ಲಾಕ್ ಅಸೋಸಿಯೇಷನ್) ರವರು ಸಭೆಯಲ್ಲಿ ಭಾಗವಹಿಸಲು ಕೋರಿದೆ.
3. ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ) ರವರು ಸಭೆಯಲ್ಲಿ ಭಾಗವಹಿಸಲು ಕೋರಿದೆ.
4. ವಾರ್ಡ್ ಸಮಿತಿಯ ಎಲ್ಲಾ ಸದಸ್ಯರುಗಳ ಮಾಹಿತಿಗಾಗಿ ಹಾಗೂ ಸಭೆಯಲ್ಲಿ ಭಾಗವಹಿಸಲು ಕೋರಿದೆ.
5. ಕಲ್ಯಾಣಾಧಿಕಾರಿಗಳು, ಪೂರ್ವ ವಲಯ, ಬಿಬಿಎಂಪಿ ರವರ ಮಾಹಿತಿಗಾಗಿ ಹಾಗೂ ಖುದ್ದಾಗಿ ಭಾಗವಹಿಸಲು ಅಥವಾ ತಮ್ಮ ಸಿಬ್ಬಂಧಿಯನ್ನು ನಿಯೋಜಿಸಲು ಕೋರಿದೆ
6. ಅರಣ್ಯ ಸಂರಕ್ಷಣಾಧಿಕಾರಿಗಳು, ಪೂರ್ವ ವಲಯ, ಬಿಬಿಎಂಪಿ ರವರ ಮಾಹಿತಿಗಾಗಿ ಹಾಗೂ ಖುದ್ದಾಗಿ ಭಾಗವಹಿಸಲು ಅಥವಾ ತಮ್ಮ ಸಿಬ್ಬಂಧಿಯನ್ನು ನಿಯೋಜಿಸಲು ಕೋರಿದೆ
7. ಸಹಾಯಕ ಕಾರ್ಯಪಾಲಕ ಅಭಿಯಂತರರು, (BWSSB) ರವರ ಮಾಹಿತಿಗಾಗಿ ಹಾಗೂ ಖುದ್ದಾಗಿ ಭಾಗವಹಿಸಲು ಅಥವಾ ತಮ್ಮ ಸಿಬ್ಬಂಧಿಯನ್ನು ನಿಯೋಜಿಸಲು ಕೋರಿದೆ.
8. ಸಹಾಯಕ ಕಾರ್ಯಪಾಲಕ ಅಭಿಯಂತರರು, (Bescom) ರವರ ಮಾಹಿತಿಗಾಗಿ ಹಾಗೂ ಖುದ್ದಾಗಿ ಭಾಗವಹಿಸಲು ಅಥವಾ ತಮ್ಮ ಸಿಬ್ಬಂಧಿಯನ್ನು ನಿಯೋಜಿಸಲು ಕೋರಿದೆ.
9. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ (SWM) (ಸರ್ವಜ್ಞನಗರ), ಬಿಬಿಎಂಪಿರವರ ಮಾಹಿತಿಗಾಗಿ ಹಾಗೂ ಖುದ್ದಾಗಿ ಹಾಜರಾಗಲು ಅಥವಾ ತಮ್ಮ ಸಿಬ್ಬಂಧಿಯನ್ನು ನಿಯೋಜಿಸಲು ಕೋರಿದೆ.
10. ಸಹಾಯಕ ಕಂದಾಯ ಅಧಿಕಾರಿಗಳು, ಹೆಚ್.ಬಿ.ಆರ್ ಲೇಔಟ್ ಉಪವಿಭಾಗ, ಬಿಬಿಎಂಪಿರವರ ಮಾಹಿತಿಗಾಗಿ ಹಾಗೂ ಖುದ್ದಾಗಿ ಹಾಜರಾಗಲು ಅಥವಾ ತಮ್ಮ ಸಿಬ್ಬಂದಿಯನ್ನು ನಿಯೋಜಿಸಲು ಕೋರಿದೆ.
11. ಪೊಲೀಸ್ ಇನ್ಸ್‌ಫೆಕ್ಟರ್ (ಸಂಚಾರ) ಬಾಣಸವಾಡಿ ಪೊಲೀಸ್ ಠಾಣೆ ರವರ ಮಾಹಿತಿಗಾಗಿ ಹಾಗೂ ಖುದ್ದಾಗಿ ಭಾಗವಹಿಸಲು ಅಥವಾ ತಮ್ಮ ಸಿಬ್ಬಂಧಿಯನ್ನು ನಿಯೋಜಿಸಲು ಕೋರಿದೆ.
12. ಪೊಲೀಸ್ ಇನ್ಸ್‌ಫೆಕ್ಟರ್ (ಕಾನೂನು ಮತ್ತು ಸುವ್ಯವಸ್ಥೆ) ಬಾಣಸವಾಡಿ ಪೊಲೀಸ್ ಠಾಣೆ ರವರು ಖುದ್ದಾಗಿ ಭಾಗವಹಿಸಲು ಅಥವಾ ತಮ್ಮ ಸಿಬ್ಬಂಧಿಯನ್ನು ನಿಯೋಜಿಸಲು ಕೋರಿದೆ.
13. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೃಹತ್ ರಸ್ತೆಗಳು ಮತ್ತು ಮೂಲಭೂತ ಸೌಕರ್ಯಗಳು ರವರ ಮಾಹಿತಿಗಾಗಿ ಹಾಗೂ ಖುದ್ದಾಗಿ ಹಾಜರಾಗಲು ಅಥವಾ ತಮ್ಮ ಸಿಬ್ಬಂಧಿಯನ್ನು ನಿಯೋಜಿಸಲು ಕೋರಿದೆ.
14. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೃಹತ್ ನೀರುಗಾಲುವೆ (SWD) ರವರ ಮಾಹಿತಿಗಾಗಿ ಹಾಗೂ ಖುದ್ದಾಗಿ ಹಾಜರಾಗಲು ಅಥವಾ ತಮ್ಮ ಸಿಬ್ಬಂಧಿಯನ್ನು ನಿಯೋಜಿಸಲು ಕೋರಿದೆ.
15. ಸಹಾಯಕ ಕಾರ್ಯಪಾಲಕ ಅಭಿಯಂತರರು, ವಿದ್ಯುತ್ (ಬೀದಿ ದೀಪಗಳ ವಿಭಾಗ-ಪೂರ್ವ), ಬಿಬಿಎಂಪಿರವರ ಮಾಹಿತಿಗಾಗಿ ಹಾಗೂ ಖುದ್ದಾಗಿ ಹಾಜರಾಗಲು ಅಥವಾ ತಮ್ಮ ಸಿಬ್ಬಂಧಿಯನ್ನು ನಿಯೋಜಿಸಲು ಕೋರಿದೆ.
16. ಆರೋಗ್ಯ ವೈದ್ಯಾಧಿಕಾರಿಗಳು, ಕಾಚರಕನಹಳ್ಳಿ ರವರು ಖುದ್ದಾಗಿ ಹಾಜರಾಗಲು ಕೋರಿದೆ.
17. ಕಾರ್ಯಪಾಲಕ ಅಭಿಯಂತರರು, ಸರ್ವಜ್ಞನಗರ ವಿಭಾಗ ರವರ ಮಾಹಿತಿಗಾಗಿ ರವಾನಿಸಿದೆ.

13/01/2021

**ಕಾರ್ಯದರ್ಶಿ ವಾರ್ಡ್ ಸಮಿತಿ-29**

**ಹಾಗೂ ಸಹಾಯಕ ಅಭಿಯಂತರರು,**

**ವಾರ್ಡ್-29**

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ ಸಂಖ್ಯೆ.29 ಕಾಚರಕನಹಳ್ಳಿಗೆ ಸಂಬಂಧಿಸಿದಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಕಛೇರಿಯ ಸಭಾಂಗಣದಲ್ಲಿ ದಿನಾಂಕ: 16-01-2021 ರಂದು ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು

**ಹಾಜರಿದ್ದ ಸದಸ್ಯರು,**

1. ಶ್ರೀ ಪ್ರಸನ್ನಕುಮಾರ್ ಪ್ರವೀಣ್ ಎ, ಅಧ್ಯಕ್ಷರು, ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು,
2. ಶ್ರೀ.ಹೆಚ್.ಎ.ಕೃಷ್ಣಾರೆಡ್ಡಿ, ಸದಸ್ಯ ಕಾರ್ಯದರ್ಶಿ ಮತ್ತು ಸಂಚಾಲಕರು,
3. ಶ್ರೀ.ಹನುಮಂತಪ್ಪ, ಹಿರಿಯ ಆರೋಗ್ಯ ನಿರೀಕ್ಷಕರು ಹಾಗೂ ಸದಸ್ಯರು,
4. ಶ್ರೀ.ರಾಜೇಶ್, ಕಿರಿಯ ಆರೋಗ್ಯ ನಿರೀಕ್ಷಕರು,
5. ಶ್ರೀ ಉತ್ತಪ್ಪ, ಸದಸ್ಯರು (ಅಧ್ಯಕ್ಷರು, ಹೆಚ್.ಆರ್.ಬಿ.ಆರ್ 3ನೇ ಬ್ಲಾಕ್ ಅಸೋಸಿಯೇಷನ್)
6. ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ),

**ಹಾಜರಿದ್ದ ಅಧಿಕಾರಿಗಳು**

1. ಶ್ರೀ ಪುಟ್ಟಸ್ವಾಮಿ, ಸಹಾಯಕ ಅಭಿಯಂತರರು, ಬೆಸ್ಕಾಂ,
2. ಶ್ರೀ.ದವಲ್, ಸಹಾಯಕ ಅಭಿಯಂತರರು, (ಬಿ.ಡಬ್ಲ್ಯೂ.ಎಸ್.ಎಸ್.ಬಿ),
3. ಶ್ರೀ ರಾಜಶೇಖರ್, ಕಂದಾಯ ನಿರೀಕ್ಷಕರು,
4. ಸಹಾಯಕ ಸಬ್ ಇನ್ಸ್‌ಪೆಕ್ಟರ್ (ಕಾನೂನು ಮತ್ತು ಸುವ್ಯವಸ್ಥೆ) ಬಾಣಸವಾಡಿ ಪೊಲೀಸ್ ಠಾಣೆ,
5. ಶ್ರೀಮತಿ ರಾಜೇಶ್ವರಿ, ಕಲ್ಯಾಣ ಇಲಾಖೆ,
6. ಶ್ರೀಮತಿ ಗೀತಾ, ಕಿರಿಯ/ಸಹಾಯಕ ಅಭಿಯಂತರರು, ಬೆಸ್ಕಾಂ ಇಲಾಖೆ.

ಈ ಸಭೆಗೆ ಹಾಜರಾಗಿದ್ದ ಮೇಲ್ಕಂಡ ಅಧ್ಯಕ್ಷರು (ನೋಡೆಲ್ ಅಧಿಕಾರಿ) ಹಾಗೂ ಅಧಿಕಾರಿಗಳನ್ನು ವಾರ್ಡ್‌ನ ಸದಸ್ಯ ಕಾರ್ಯದರ್ಶಿ ಹಾಗೂ ಸಂಚಾಲಕರು ಸ್ವಾಗತ ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು.

1) **ಶ್ರೀ ಉತ್ತಪ್ಪ, ಸದಸ್ಯರು (ಅಧ್ಯಕ್ಷರು, ಹೆಚ್.ಆರ್.ಬಿ.ಆರ್ 3ನೇ ಬ್ಲಾಕ್ ಅಸೋಸಿಯೇಷನ್) ರವರು ಮಾತನಾಡಿ,** ಜಲವಾಯು ವಿಹಾರ್ ಪಕ್ಕದ ಸಿ.ಎಂ.ಆರ್ ರಸ್ತೆಯಲ್ಲಿ ವೈಟ್ ಟ್ಯಾಪಿಂಗ್ ಕಾಮಗಾರಿ ಚಾಲನೆಯಲ್ಲಿದ್ದು, ರಸ್ತೆಯಲ್ಲಿನ ಅಕ್ಕಪಕ್ಕದ ಮನೆಗಳಿಗೆ ದೂಳು ಬರುತ್ತಿದ್ದು, ದಿನನಿತ್ಯ ರಸ್ತೆಯಲ್ಲಿ ನೀರು ಸಿಂಪಡಿಸಿ, ದೂಳು ಹರಡುವುದನ್ನು ತಪ್ಪಿಸಲು ಪ್ರಸ್ತಾಪಿಸಿದಾಗ, ಸಭೆಯಲ್ಲಿ ಚರ್ಚಿಸಲಾಗಿ, ಈ ಬಗ್ಗೆ ಯೋಜನೆ ವಿಭಾಗ (ಕೇಂದ್ರ) ರವರಿಗೆ ಕೂಡಲೇ ಕಾಮಗಾರಿ ನಡೆಯುವ ಸ್ಥಳದಲ್ಲಿ ನೀರನ್ನು ಸಿಂಪಡಿಸಿ, ದೂಳು ಹರಡುವುದನ್ನು ನಿಯಂತ್ರಿಸುವಂತೆ ತಿಳಿಸಿ, ಹಾಗೂ ಮುಂದಿನ ಸಭೆಗೆ ಹಾಜರಾಗಲು ಸೂಚಿಸಲು ಸಭೆಯು ಸರ್ವಾನುಮತದಿಂದ ಆದೇಶಿಸಿತು.

2) **ಮಾನ್ಯ ಅಧ್ಯಕ್ಷರು ಮಾತನಾಡಿ,** ಬಿಡಿಎ ಬಡಾವಣೆಯಲ್ಲಿ ನೀರು ಸಮರ್ಪಕವಾಗಿ ಸರಬರಾಜು ಆಗುತ್ತಿರುವುದಿಲ್ಲವೆಂದು ಸಾರ್ವಜನಿಕರು ದೂರಿರುವ ಹಿನ್ನಲೆಯಲ್ಲಿ ಸಭಾ ಗಮನಕ್ಕೆ ತಂದಾಗ ಸಭೆಯಲ್ಲಿ ಚರ್ಚಿಸಿ, ಸಭೆಯಲ್ಲಿ ಹಾಜರಿದ್ದ ಜಲಮಂಡಳಿ ಅಭಿಯಂತರರು, ಸ್ಟೋರೇಜ್ ಟ್ಯಾಂಕ್‌ಗೆ ನೀರು ಬಾರದ

ಕಾರಣ ನೀರು ಸರಬರಾಜಿನಲ್ಲಿ ವ್ಯತ್ಯಯವಾಗಿರುತ್ತದೆ. ಮುಂದಿನ ದಿನಗಳಲ್ಲಿ ಸಮರ್ಪಕವಾಗಿ ನೀರು ಸರಬರಾಜು ಮಾಡಲಾಗುವುದೆಂದು ಸಭೆಗೆ ಉತ್ತರಿಸಿದರು.

3) ವೈದ್ಯಾಧಿಕಾರಿಗಳು ಮಾತನಾಡಿ, ಪ್ರಸ್ತುತ ವಾರ್ಡ್ ಪ್ರದೇಶದಲ್ಲಿ ಕೋವಿಡ್-19 ನಿಯಂತ್ರಣದಲ್ಲಿದ್ದು, ಒಟ್ಟು 632 ಪ್ರಕರಣಗಳ ಪೈಕಿ, 421 ಹೋಮ್ ಐಸೋಲೇಷನ್ ಪೂರ್ಣಗೊಳಿಸಿರುತ್ತಾರೆ, 178 ಜನ ಆಸ್ಪತ್ರೆಯಿಂದ ಗುಣಮುಖರಾಗಿ ಬಿಡುಗಡೆಯಾಗಿರುತ್ತಾರೆ. 20 ಜನ ಮರಣ ಹೊಂದಿರುತ್ತಾರೆ, ಸಕ್ರಿಯ ಪ್ರಕರಣಗಳು 13 ಆಗಿರುತ್ತವೆ. ನಂತರ ಮಾತನಾಡಿ, ವಾರ್ಡ್ ಪ್ರದೇಶದಲ್ಲಿ 17000 ಜನಕ್ಕೆ ಆರ್.ಟಿ.ಪಿ.ಸಿ.ಆರ್ ತಪಾಸಣೆ ಮಾಡಲಾಗಿರುತ್ತದೆ. 5625 ಜನಕ್ಕೆ ರ್‍ಯಾಪಿಡ್ ತಪಾಸಣೆ ಕೈಗೊಳ್ಳಲಾಗಿರುತ್ತದೆ. ಬಿಬಿಎಂಪಿ ಗೆ ಕೋವಿಶೀಲ್ಡ್ ವ್ಯಾಕ್ಸಿನ್ ಔಷಧಿ ಬಂದಿದ್ದು, ವಾರ್ಡ್ ಪ್ರದೇಶದಲ್ಲಿ 1) Lifewing Hospital 2) Zion Hospital and 3) Florence Nursing Home ಆಸ್ಪತ್ರೆಗಳನ್ನು ಗುರುತಿಸಿದ್ದು, ಪ್ರಥಮವಾಗಿ ಆರೋಗ್ಯ ಇಲಾಖೆಯ ಸಿಬ್ಬಂದಿಗೆ ವ್ಯಾಕ್ಸಿನೇಷನ್ ಔಷಧಿಯನ್ನು ನೀಡಲಾಗುವುದು. ತದನಂತರ ಹಂತ ಹಂತವಾಗಿ ಎಲ್ಲಾ ಇಲಾಖಾವಾರು ಸಿಬ್ಬಂದಿಗೆ ವ್ಯಾಕ್ಸಿನೇಷನ್ ನೀಡಲಾಗುವುದೆಂದು ಸಭೆಗೆ ತಿಳಿಸಿದರು.

ಕೊನೆಯದಾಗಿ ಮಾನ್ಯ ಅಧ್ಯಕ್ಷರು ಮಾತನಾಡಿ, ಇಂದಿನ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಿರುವ ಎಲ್ಲಾ ನಿರ್ಣಯಗಳ ಬಗ್ಗೆ ಕೂಡಲೇ ಕ್ರಮ ಕೈಗೊಳ್ಳಲು ಆದೇಶಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

ವಾರ್ಡ್ ಸಮಿತಿ ಸದಸ್ಯ ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ

Prasanna kumar A
ಅಧ್ಯಕ್ಷರು
(ನೋಡೆಲ್ ಅಧಿಕಾರಿಗಳು)
ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ

**ಪ್ರತಿಯನ್ನು**

1) ವಲಯ ವಿಶೇಷ ಆಯುಕ್ತರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
2) ಜಂಟಿ ಆಯುಕ್ತರರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
3) ಮುಖ್ಯ ಅಭಿಯಂತರರು (ಪೂ) ರವರ ಅವಗಾಹನೆಗಾಗಿ ಸಲ್ಲಿಸಿದೆ.
4) ಕಾರ್ಯಪಾಲಕ ಅಭಿಯಂತರರು (ಸರ್ವಜ್ಞನಗರ) ರವರ ಅವಗಾಹನೆಗಾಗಿ.
5) ವಾರ್ಡ್ ಕಮಿಟಿಯ ಸದಸ್ಯರಿಗೆ.
6) ಕಛೇರಿ ಕಡತಕ್ಕೆ.

ಅಭಿಯಂತರರ ಕಾರ್ಯಾಲಯ
ಬೆಂಗಳೂರು-1